ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 05 ನೇ ಫೆಬ್ರುವರಿ, 2021

ರಾಜ್ಯದಲ್ಲಿ ಬೆಳಕಿಗೆ ಬರುತ್ತಿರುವ ಬಾಲ್ಯವಿವಾಹ ಪದ್ಧತಿ ಕುರಿತು

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

428 (565) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿ ಬಾಲ್ಯವಿವಾಹ ಪದ್ಧತಿ ನಿಯಮಬಾಹಿರವಾಗಿದ್ದರೂ ಸಹ ಇತ್ತೀಚೆಗೆ ಹಲವಾರು ಪ್ರಕರಣಗಳು ಬೆಳಕಿಗೆ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಾಲ್ಯ ವಿವಾಹಗಳಿಗೆ ತುತ್ತಾಗಿ ಎಷ್ಟು ಬಾಲಕಿಯರು ವಿಧವೆಯರಾಗಿದ್ದಾರೆ;

(ಇ) ಅವರುಗಳು ಮರು ಮದುವೆ ಆಗಲು ಮುಂದೆ ಬಂದಲ್ಲಿ, ಸರ್ಕಾರ ಅವರಿಗೆ ಹೇಗೆ ರಕ್ಷಣೆಯನ್ನು ಕೊಡುತ್ತದೆ;

(ಈ) ಎಷ್ಟು ಬಾಲ್ಯ ವಿವಾಹ ಪ್ರಕರಣಗಳನ್ನು ನ್ಯಾಯಾಲಯದಿಂದ ತಡೆಯಾಜ್ಞೆ ಪಡೆದು ನಿಲ್ಲಿಸಲಾಗಿದೆ?